ಕರ್ನಾಟಕ ವಿಧಾನ ಪರಿಷತ್ತು

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	658
2)	ಸದಸ್ಯರ ಹೆಸರು	:	ಶ್ರೀ ಘೋಟ್ನೆಕರ್ ಶ್ರೀಕಾಂತ ಲಕ್ಷ್ಮಣ
3)	ಉತ್ತರಿಸಬೇಕಾದ ದಿನಾಂಕ	:	12.03.2020
4)	ಉತ್ತರಿಸುವವರು	:	ಮಾನ್ಯ ಮುಖ್ಯಮಂತ್ರಿಗಳು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕಾರವಾರ ಜಿಲ್ಲೆಯಲ್ಲಿ ವಿಮಾನ ನಿಲ್ದಾಣಕ್ಕೆ ಭೂಮಿ ಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಭೂಸ್ವಾಧೀನ ಪಡಿಸಿಕೊಂಡಿರುವ ಸ್ಥಳದ ಸವಿಸ್ತಾರ ವರದಿ ನೀಡುವುದು;	ಕಾರವಾರ ವಿಮಾನ ನಿಲ್ದಾಣದ ಅಭಿವೃದ್ಧಿಗಾಗಿ ಇನ್ನೂ ಭೂಮಿ ಸ್ವಾಧೀನ ಪಡಿಸಿಕೊಂಡಿರುವುದಿಲ್ಲ.
ಆ)	ಸದರಿ ವಿಮಾನ ನಿಲ್ದಾಣದ ಕಾರ್ಯ ಪ್ರಾರಂಭವಾಗುವುದು ಯಾವಾಗ; ಸದರಿ ವಿಮಾನ ನಿಲ್ದಾಣಕ್ಕೆ ಭೂಮಿ ಸ್ವಾಧಿನಪಡಿಸಿಕೊಂಡಿದ್ದಲ್ಲಿ, ಭೂಮಿ ಕಳೆದುಕೊಂಡವರಿಗೆ ಪರಿಹಾರ ನೀಡಲಾಗುವುದೇ; ಹಾಗಾದರೆ, ಪರಿಹಾರ ಯಾವ ರೀತಿಯಲ್ಲಿ ನೀಡಲಾಗುವುದು; (ಮಾಹಿತಿ ನೀಡುವುದು)	ಕಾರವಾರ ಜಿಲ್ಲೆಯ ಅಂಕೋಲಾ ತಾಲ್ಲೂಕು ಅಲಗೇರಿ ಗ್ರಾಮದಲ್ಲಿ ನೌಕಪಡೆಯು ಅಭಿವೃದ್ಧಿ ಪಡಿಸಲು ಯೋಜಿಸಿರುವ ವಿಮಾನ ನಿಲ್ದಾಣದ ಸಮೀಪದಲ್ಲಿಯೇ ಸಿವಿಲಿಯನ್ ಟರ್ಮಿನಲ್ ಅನ್ನು ಅಭಿವೃದ್ಧಿ ಪಡಿಸಲು ಜಿಲ್ಲಾಡಳಿತದ ವತಿಯಿಂದ ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳಲು ನಿರ್ದೇಶಿಸಲಾಗಿದೆ. ವಿಮಾನ ನಿಲ್ದಾಣದ ಕಾಮಗಾರಿಯನ್ನು ನೌಕಪಡೆಯು ಅನುಷ್ಠಾನಗೊಳಿಸಲು ಪ್ರಾರಂಭಿಸಿದ ಕೂಡಲೇ ರಾಜ್ಯ ಸರ್ಕಾರದ ವತಿಯಿಂದ ಸಿವಿಲಿಯನ್ ಟರ್ಮಿನಲ್ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲಾಗುವುದು. ಪ್ರಸ್ತುತ ಸಿವಿಲಿಯನ್ ಟರ್ಮಿನಲ್ ಅಭಿವೃದ್ಧಿಗಾಗಿ ಭೂಸ್ವಾಧೀನ ಹಾಗೂ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಸಚಿವ ಸಂಪುಟದ ಅನುಮೋದನೆಯನ್ನು ಪಡೆಯಲಾಗುತ್ತಿದ್ದು, ನಂತರ ಭೂಸ್ವಾಧೀನ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು..
ಇ)	ಕಾಮಗಾರಿಗೆ ಎಷ್ಟು ಅನುದಾನದ ಅವಶ್ಯಕತೆ ಇದೆ; ಅದರಲ್ಲಿ ರಾಜ್ಯದ ಮತ್ತು ಕೇಂದ್ರ ಸರ್ಕಾರದ ಪಾಲೆಷ್ಟು;	
ಈ)	ಕಾಮಗಾರಿ ಯಾವಾಗ ಪೂರ್ಣಗೊಳ್ಳುತ್ತದೆ? (ಮಾಹಿತಿ ನೀಡುವುದು)	

ಸಂಖ್ಯೆ: ಮೂಅಇ 51 ರಾಅವಿ 2020

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ